**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 424/2023**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ03**

**ದಿನಾಂಕಃ 12.11.2025** **ಸಿಡಬ್ಲ್ಯೂ03**

| | |
|---|---|
| ಹೆಸರು | ಬಸವರಾಜ |
| ತಂದೆ ಹೆಸರು | ಹುಲಿಗೆಪ್ಪ |
| ವಯಸ್ಸು | 50 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ದಾವಣಗೆರೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಚಾಸಾ.2 ರವರ ಪರಿಚಯವಿಲ್ಲ. ಮೃತ ಸಂದೀಪ ಗೊತ್ತಿಲ್ಲ. ಸಾಕ್ಷಿಗೆ ಒಂದು ದಾಖಲೆಯನ್ನು ತೋರಿಸಲಾಗಿ ಅದರಲ್ಲಿ ತನ್ನ ಸಹಿಯನ್ನು ಗುರುತಿಸಿದ್ದು ಅದು ಸಮೀಕ್ಷೆ ವರದಿ ಆಗಿದ್ದು ಅದನ್ನು ಈಗಾಗಲೇ ನಿಪಿ.1 ಎಂದು ಸಾಕ್ಷಿಯ ಸಹಿಯನ್ನು ನಿಪಿ.1 (ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಸುಮಾರು 2 ವರ್ಷಗಳ ಹಿಂದೆ ಗುತ್ತೂರು ಠಾಣೆಯಲ್ಲಿ ಮಾಡಿರುತ್ತೇನೆ. ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ಗೊತ್ತಿಲ್ಲ. ನನಗೆ ಆರೋಪಿಯ ಪರಿಚಯವಿಲ್ಲ. ನಿಪಿ.1 ರಲ್ಲಿರುವ ಸಂಗತಿಗಳ ಬಗ್ಗೆ ನನಗೆ ಮಾಹಿತಿ ಇಲ್ಲ. ಪ್ರಕರಣದ ಬಗ್ಗೆ ನನಗೆ ಮಾಹಿತಿ ಇಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ 07.02.2023 ರಂದು ಆರೋಪಿಯ ರೈಸ್ ಮಿಲ್ ನಲ್ಲಿ ಮೃತ ಸಂದೀಪ ಕೆಲಸ ಮಾಡುತ್ತಿದ್ದು ಆರೋಪಿಯ ನಿರ್ಲಕ್ಷ್ಯತನದಿಂದ ಕಾರ್ಖಾನೆಯಲ್ಲಿ ವಿದ್ಯುತ್ ಪ್ರವಹಿಸಿದ ಕಾರಣ ಸಂದೀಪನು ಮೃತನಾಗಿರುತ್ತಾನೆ ಎಂದರೆ ನನಗೆ ಗೊತ್ತಿಲ್ಲ. ಈ ವಿಚಾರವಾಗಿ ದಿಃ 09.02.2023 ರಂದು ಕಾರ್ಖಾನೆಗಳ ಸಹಾಯಕ ನಿರ್ದೇಶಕರು ಸ್ಥಳಕ್ಕೆ ಬೇಟಿ ನೀಡಿ ಪರಿಶೀಲನೆ ಮಾಡಿ ವರದಿ ನೀಡಿರುತ್ತಾರೆ ಎಂದರೆ ಸರಿಯಲ್ಲ. ಸದರಿ ಕಾಲಕ್ಕೆ ನಾನು ಹಾಜರಿದ್ದು ವರದಿಗೆ ಸಹಿ ಮಾಡಿರುತ್ತೇನೆ ಎಂದರೆ ಸರಿಯಲ್ಲ. ಈ ವಿಚಾರವಾಗಿ ನಾನು ಚಾಸಾ.2 ರವರು ಹೇಳಿಕೆ ನೀಡಿರುತ್ತೇವೆ ಎಂದರೆ ಸರಿಯಲ್ಲ. ಎಲ್ಲಾ ವಿಚಾರ

ಗೊತ್ತಿದ್ದರೂ ಸಹ ಆರೋಪಿಗೆ ಸಹಾಯ ಮಾಡಬೇಕು ಎಂಬ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿ ಪರ ವಕೀಲರಿಂದಃ ಇಲ್ಲ .**

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

sd/

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ